**Bangalore**
**Regional News**
**18.04.2025 / 18.40 hrs**
ಆಕಾಶವಾಣಿ ಬೆಂಗಳೂರು
ಪ್ರದೇಶ ಸಮಾಚಾರ

<u>ಮುಖ್ಯಾಂಶಗಳು</u>

೧. 'ವಿದ್ಯಾಸಿರಿ' ಯೋಜನೆಯಡಿ ವಿದ್ಯಾರ್ಥಿ ವೇತನ ಪರಿಷ್ಕರಣೆಗೆ ಒತ್ತು - ಮುಖ್ಯಮಂತ್ರಿ ಸಿದ್ದರಾಮಯ್ಯ

೨. ಅಗತ್ಯ ವಸ್ತುಗಳ ಬೆಲೆ ಏರಿಕೆ ವಿರೋಧಿಸಿ ಬಿಜೆಪಿಯಿಂದ ಕಲಬುರಗಿಯಲ್ಲಿ ಜನಾಕ್ರೋಶ ಯಾತ್ರೆ

೩. ಸಾಹಿತಿ ಸತ್ಪುರುಷರಿಗೆ ಪ್ರೋತ್ಸಾಹಿಸಿದ ಹಿರಿಮೆ ಗದಗ ಜಿಲ್ಲೆಯ ಕುರ್ತಕೋಟಿ ಗ್ರಾಮಕ್ಕೆ ಸಲ್ಲುತ್ತದೆ - ಸಚಿವ ಎಚ್.ಕೆ. ಪಾಟೀಲ

೪. ಐಪಿಎಲ್ ಟಿ-೨೦ ಕ್ರಿಕೆಟ್; ಬೆಂಗಳೂರಿನ ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿಂದು ರಾಯಲ್ ಚಾಲೆಂಜರ್ಸ್ ಬೆಂಗಳೂರು - ಪಂಜಾಬ್ ಕಿಂಗ್ಸ್ ಮುಖಾಮುಖಿ

**<><*<><>*><>**

ಬೆಂಗಳೂರಿನ ಕೆಂಗೇರಿಯಲ್ಲಿ ನೂತನವಾಗಿ ನಿರ್ಮಿಸಿರುವ ಕಲಿದೇವ ಸಮುದಾಯ ಭವನವನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಇಂದು ಲೋಕಾರ್ಪಣೆಗೊಳಿಸಿದರು. ಬಳಿಕ ಮುಖ್ಯಮಂತ್ರಿ ಸಿದ್ದರಾಮಯ್ಯ, ಎಲ್ಲ ಸಮುದಾಯಗಳ ಮಕ್ಕಳು ಉನ್ನತ ಶಿಕ್ಷಣ ಪಡೆಯಬೇಕು ಎಂಬ ಉದ್ದೇಶದಿಂದ ವಿದ್ಯಾಸಿರಿ ಯೋಜನೆಯನ್ನು ಜಾರಿಗೆ ತರಲಾಗಿದ್ದು, ಈ ಯೋಜನೆಯಡಿ ಪ್ರತಿ ವಿದ್ಯಾರ್ಥಿಗೆ ನೀಡುವ ಮೊತ್ತವನ್ನು ಒಂದೂವರೆಯಿಂದ ಎರಡು ಸಾವಿರ ರೂಪಾಯಿಗಳಿಗೆ ಹೆಚ್ಚಿಸಲಾಗುವುದು ಎಂದು ಹೇಳಿದರು. ಮಡಿವಾಳ ಸಮುದಾಯದ ಪ್ರಗತಿ ಸರ್ಕಾರ ಬದ್ಧವಾಗಿದ್ದು, ಈ ಸಮುದಾಯವನ್ನು ಮುಖ್ಯವಾಹಿನಿಗೆ ತರಲು ಎಲ್ಲ ಪ್ರಯತ್ನ ಮಾಡಲಾಗುವುದು. ೧೨ನೇ ಶತಮಾನದಲ್ಲಿ ಮಡಿವಾಳ ಮಾಚಿದೇವರು, ಬಸವಣ್ಣನವರ ಜೊತೆ ಸೇರಿ ಸಮಾಜದ ಬದಲಾವಣೆಗೆ ಮುಂದಾಗಿದ್ದರು. ಬಸವಾದಿ ಶರಣರು ಜಾತಿಮುಕ್ತ ಮನುಷ್ಯ ಸಮಾಜ ನಿರ್ಮಾಣಕ್ಕೆ ಹೋರಾಟ ಮಾಡಿದ್ದರು ಎಂದು ಹೇಳಿದರು. ಈ ವೇಳೆ, ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ಶಾಸಕ ಎಸ್.ಟಿ. ಸೋಮಶೇಖರ್ ಮಾಜಿ ಸಭಾಪತಿ ವಿ.ಆರ್. ಸುದರ್ಶನ್ ಮತ್ತಿತರರು ಉಪಸ್ಥಿತರಿದ್ದರು.

**<><*<><>*><>**

ಅಗತ್ಯ ವಸ್ತುಗಳ ಬೆಲೆ ಏರಿಕೆ, ಪರಿಶಿಷ್ಟ ಸಮುದಾಯದ ಅನುದಾನ ದುರ್ಬಳಕೆ ಹಾಗೂ ಅಲ್ಪಸಂಖ್ಯಾತರನ್ನು ತುಷ್ಟೀಕರಣ ಆರೋಪಿಸಿ ರಾಜ್ಯ ಸರ್ಕಾರದ ವಿರುದ್ಧ ಕಲಬುರಗಿಯಲ್ಲಿಂದು ಬಿಜೆಪಿ ೨ನೇ ಹಂತದ ಜನಾಕ್ರೋಶ ಯಾತ್ರೆ ನಡೆಸಿತು. ಈ ವೇಳೆ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ, ವಿಧಾನಪರಿಷತ್ ನಾಯಕ ಛಲವಾದಿ ನಾರಾಯಣಸ್ವಾಮಿ ಸೇರಿದಂತೆ ಮತ್ತಿತರ ಮುಖಂಡರು ಪಾಲ್ಗೊಂಡಿದ್ದರು. ಬಿ.ವೈ.ವಿಜಯೇಂದ್ರ, ರಾಜ್ಯದಲ್ಲಿನ ಕಾಂಗ್ರೆಸ್ ಸರ್ಕಾರ ಅಗತ್ಯವಸ್ತುಗಳ ಬೆಲೆಗಳನ್ನು ಹೆಚ್ಚಳ ಮಾಡಿದ್ದು, ಇದರಿಂದ ಜನಸಾಮಾನ್ಯರು ತೀವ್ರ ತೊಂದರೆಗೆ

ಒಳಾಗಿದ್ದಾರೆ. ವಿಧಾನಸಭಾ ಚುನಾವಣೆಗೆ ಮುನ್ನ ಸಿದ್ದರಾಮಯ್ಯ ಅವರು ರಾಮರಾಜ್ಯ ನಿರ್ಮಿಸುವ ಮಾತುಗಳನ್ನಾಡಿ, ಈಗ ವಚನ ಭ್ರಷ್ಟರಾಗಿದ್ದಾರೆ ಎಂದು ಟೀಕಿಸಿದರು.

**<><*<><>*><>**

ಕನ್ನಡ ನಾಡಿನ ಹಲವಾರು ಸಾಹಿತಿ ಸತ್ಪುರುಷರಿಗೆ ಪ್ರೋತ್ಸಾಹಿಸಿದ ಹಿರಿಮೆ ಕುರ್ತಕೋಟಿ ಗ್ರಾಮಕ್ಕೆ ಸಲ್ಲುತ್ತದೆ ಎಂದು ರಾಜ್ಯದ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಪ್ರವಾಸೋದ್ಯಮ ಇಲಾಖೆ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲ ಹೇಳಿದ್ದಾರೆ. ಅವರು ಗದಗ ತಾಲೂಕಿನ ಕುರ್ತಕೋಟಿಯಲಿ ಜರುಗಿದ ಗದಗ ತಾಲೂಕ ೫ನೇ ಕನ್ನಡ ಸಾಹಿತ್ಯ ಸಮ್ಮೇಳನವನ್ನು ಉದ್ಘಾಟಿಸಿ ಮಾತನಾಡಿದ ಅವರು, ಕುರ್ತಕೋಟಿ ಗ್ರಾಮ ಬಯಲಾಟ, ರಂಗಭೂಮಿ, ಸಂಗೀತ, ಸಾಂಸ್ಕೃತಿಕ ಚಟುವಟಿಕೆಗಳಿಗೆ ಪ್ರಸಿದ್ಧವಾಗಿದೆ. ಕುರ್ತಕೋಟಿ ಗ್ರಾಮದ ಕನ್ನಡದ ಕೀರ್ತಿ ಎಂದೇ ಪ್ರಖ್ಯಾತರಾದ ಡಾ.ಕೀರ್ತಿನಾಥ ಕುರ್ತಕೋಟಿ ಅವರು ಖ್ಯಾತ ಸಾಹಿತಿ ಹಾಗೂ ವಿಮರ್ಶಕರಾಗಿದ್ದರು. ಎಂದರು. ಹಲವಾರು ವೈಶಿಷ್ಟ್ಯಗಳನ್ನು ಹೊಂದಿದ ಕುರ್ತಕೋಟಿ ಗ್ರಾಮದಲ್ಲಿ ಗದಗ ತಾಲೂಕು ಕನ್ನಡ ಸಾಹಿತ್ಯ ಸಮ್ಮೇಳನ ಜರುಗಿರುವುದು ಸಂತಸ ತಂದಿದೆ ಎಂದು ಹರ್ಷ ವ್ಯಕ್ತಪಡಿಸಿದರು.

**<><*<><>*><>**

ವಕ್ಫ್ ತಿದ್ದುಪಡಿ ಕಾಯ್ದೆಯನ್ನು ವಿರೋಧಿಸಿ ಕರ್ನಾಟಕ ಉಲಮಾ ಒಕ್ಕೂಟದ ನೇತೃತ್ವದಲ್ಲಿ ಮಂಗಳೂರಿನ ಅಡ್ಯಾರ್ ಕಣ್ಣೂರಿನ ಶಾ ಗಾರ್ಡನ್‌ನಲ್ಲಿಂದು ಬೃಹತ್ ಪ್ರತಿಭಟನಾ ಸಮಾವೇಶ ನಡೆಯಿತು. ಪ್ರತಿಭಟನಾ ಸ್ಥಳದಲ್ಲಿ ಸೇರಿದ್ದ ಸಾವಿರಾರು ಮಂದಿ ಘೋಷಣೆಗಳನ್ನು ಕೂಗುತ್ತಾ ವಕ್ಫ್ ತಿದ್ದುಪಡಿ ಕಾಯ್ದೆ ವಿರುದ್ಧ ತಮ್ಮ ಅಸಮಾಧಾನ ವ್ಯಕ್ತಪಡಿಸಿದರು. ಪ್ರತಿಭಟನಾ ಸಮಾವೇಶದ ಹಿನ್ನೆಲೆಯಲ್ಲಿ ಬಿಗಿ ಪೊಲೀಸ್ ಬಂದೋಬಸ್ತ್ ಮಾಡಲಾಗಿತ್ತು. ಭಾರೀ ಸಂಖ್ಯೆಯಲ್ಲಿ ಜನ ಸೇರಿದ್ದ ಕಾರಣ ಮೊಬೈಲ್ ನೆಟ್‌ವರ್ಕ್ ಬಹುತೇಕವಾಗಿ ಜಾಮ್ ಆಗಿದ್ದು, ಸಂಪರ್ಕ, ಸಂವಹನಕ್ಕೆ ಅಡ್ಡಿಯಾಯಿತು. ರಾಷ್ಟ್ರೀಯ ಹೆದ್ದಾರಿ ೭೩ ಬಂದ್ ಆದ ಪರಿಣಾಮ ವಾಹನಗಳು ಬದಲಿ ಮಾರ್ಗದಲ್ಲಿ ಸಂಚರಿಸಬೇಕಾಯಿತು. ಇದರಿಂದ ಟ್ರಾಫಿಕ್ ಜಾಮ್ ಉಂಟಾಗಿ ಸಾರ್ವಜನಿಕರು ನಿಗದಿತ ಸ್ಥಳ ತಲುಪಲು ಹರಸಾಹಸ ಪಡಬೇಕಾಯಿತು.

**<><*<><>*><>**

ವೈದ್ಯಕೀಯ ವಿಜ್ಞಾನ ಸಾಕಷ್ಟು ಪ್ರಗತಿ ಸಾಧಿಸಿ ಕೃತಕ ಅಂಗಾಂಗಗಳ ಲಭ್ಯತೆ ಇದ್ದರೂ ಹಾಗೂ ಹೃದಯ, ಕಣ್ಣು, ಕಿಡ್ನಿ ಸೇರಿದಂತೆ ವಿವಿಧ ಅಂಗಗಳನ್ನು ಮತ್ತೊಬ್ಬರಿಂದ ಪಡೆದು ಅಂಗಾಂಗ ಕಸಿ ಮಾಡುವ ಮಟ್ಟಿಗೆ ಸಾಧನೆ ಮಾಡಿದ್ದರೂ ರಕ್ತವನ್ನು ಮಾತ್ರ ಇದುವರೆಗೆ ಕೃತಕವಾಗಿ ತಯಾರಿಸಲು ಸಾಧ್ಯವಾಗಿಲ್ಲ ಮತ್ತು ರಕ್ತಕ್ಕೆ ಪರ್ಯಾಯ ಇಲ್ಲ ಎಂದು ಉನ್ನತ ಶಿಕ್ಷಣ ಸಚಿವರೂ ಆದ ಚಿಕ್ಕಬಳ್ಳಾಪುರ ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಂ.ಸಿ.ಸುಧಾಕರ್ ತಿಳಿಸಿದ್ದಾರೆ. ಅವರಿಂದು ಭಾರತೀಯ ರೆಡ್ ಕ್ರಾಸ್ ಸಂಸ್ಥೆಯ ಚಿಕ್ಕಬಳ್ಳಾಪುರ ಜಿಲ್ಲಾ ರೆಡ್ ಕ್ರಾಸ್ ಭವನದ ೪ ಕೋಟಿ ವೆಚ್ಚದ ಕಾಮಗಾರಿಗೆ ಶಂಕುಸ್ಥಾಪನೆ ನೆರವೇರಿಸಿ ಅವರು ಮಾತನಾಡಿದರು. ಎಲ್ಲಾ ದಾನಗಳಲ್ಲಿ ರಕ್ತದಾನ ಅತ್ಯಂತ ಶ್ರೇಷ್ಠ ದಾನವಾಗಿದೆ. ತುರ್ತು ಸಂದರ್ಭಗಳಲ್ಲಿ ಯಾವುದೇ ಜಾತಿ, ಧರ್ಮಗಳ ತಾರತಮ್ಯ, ಭೇದವಿಲ್ಲದೆ ಅಮೂಲ್ಯ ಜೀವಗಳನ್ನು ಉಳಿಸುವ ರಕ್ತವನ್ನು ಸಂಗ್ರಹಿಸಲು ಪ್ರತಿಯೊಬ್ಬರೂ ಪ್ರಾಮಾಣಿಕ ಪ್ರಯತ್ನ ಮಾಡಬೇಕು. ವಿಜ್ಞಾನ ತಂತ್ರಜ್ಞಾನ ಎಷ್ಟೇ ಮುಂದುವರೆದಿದ್ದರೂ ಕೃತಕ ರಕ್ತ ತಯಾರಿಕೆ ಸಾಧ್ಯವಾಗಿಲ್ಲ ಹಾಗೂ ರಕ್ತಕ್ಕೆ ಪರ್ಯಾಯವಾಗಿ ಇನೊಂದನ್ನೂ ಕಂಡು ಹಿಡಿಯಲು

ಸಾಧ್ಯವಾಗಿಲ್ಲ ಎಂದರು. ಸಮಾಜ ಸೇವೆ ಮಾಡುವವರು ಮೊದಲ ಆದ್ಯತೆಯಾಗಿ ರಕ್ತದಾನ ಶಿಬಿರಗಳನ್ನು ಆಯೋಜಿಸಿ ಪ್ರಾಮಾಣಿಕವಾದ ಸೇವೆ ಸಲ್ಲಿಸಬೇಕು ಎಂದು ಸಲಹೆ ನೀಡಿದರು.

<><*<><>*><>

ಗೃಹಲಕ್ಷ್ಮಿ ಯೋಜನೆಯಡಿ ಮಂಡ್ಯ ಜಿಲ್ಲೆಯ ಅರ್ಹ ಫಲಾನುಭವಿಗಳಿಗೆ ಜನವರಿ ೨೪ ರಿಂದ ಜನವರಿ ೨೦೨೫ ರವರೆಗೆ ಒಂದು ಸಾವಿರದ ೯೯ ಕೋಟಿಗೂ ಹೆಚ್ಚು ಅನುದಾನ ನೀಡಲಾಗಿದೆ ಎಂದು ಜಿಲ್ಲಾ ಗ್ಯಾರಂಟಿ ಯೋಜನೆಯ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಚಿಕ್ಕಲಿಂಗಯ್ಯ ಹೇಳಿದರು. ಮಂಡ್ಯ ನಗರದ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಮಾತನಾಡಿದ ಅವರು, ಮಂಡ್ಯ ಜಿಲ್ಲೆಯಲ್ಲಿ ಒಟ್ಟು ೪ ಲಕ್ಷದ ೪೮ ಸಾವಿರದ ೭೬೯ ಅರ್ಹ ಫಲಾನುಭವಿಗಳಿದ್ದು, ಜನವರಿ ಮಾಹೆಯ ಗೃಹಲಕ್ಷ್ಮಿ ಹಣವನ್ನು ಡಿ.ಬಿ.ಟಿ. ಮೂಲಕ ಪಾವತಿಸಲಾಗುತ್ತಿದೆ ಎಂದರು. ಜನವರಿ ಮಾಹೆಯಲ್ಲಿ ೩೦ ಕೋಟಿ ೭೩ ಲಕ್ಷ ಹಣವನ್ನು ಈಗಾಗಲೇ ಫಲಾನುಭವಿಗಳ ಖಾತೆಗೆ ಜಮಾ ಮಾಡಲಾಗಿದ್ದು, ಬಾಕಿ ಹಣವನ್ನು ಶೀಘ್ರವೇ ಫಲಾನುಭವಿಗಳ ಖಾತೆಗೆ ಜಮಾ ಮಾಡಲಾಗುವುದು ಎಂದರು.

<><*<><>*><>

ಕೋಲಾರ ತಾಲೂಕಿನ ಚೌಡದೇನಹಳ್ಳಿ ಗ್ರಾಮದಲ್ಲಿ ೨೮ ವರ್ಷಗಳ ನಂತರ ಊರುಹಬ್ಬ ಮತ್ತು ದೊಡ್ಡದ್ಯಾವರ ಮಹೋತ್ಸವನ್ನು ಹಮ್ಮಿಕೊಂಡಿದ್ದು, ಕಾರ್ಯಕ್ರಮಕ್ಕೆ ಕಂದಾಯ ಸಚಿವ ಕೃಷ್ಣ ಬೈರೇಗೌಡ ಇಂದು ಚಾಲನೆ ನೀಡಿದ್ದಾರೆ. ನಾಳೆ ಬೆಳಿಗ್ಗೆ ೧೦.೩೦ ಕ್ಕೆ ಮಹಾಗಣಪತಿ, ವೇಣುಗೋಪಾಲಸ್ವಾಮಿ, ವೀರಾಂಜನೇಯಸ್ವಾಮಿ ದೇವರುಗಳಿಗೆ ದೀಪೋತ್ಸವ, ನಾಡಿದ್ದು ಬೆಳಗ್ಗೆ ೮.೩೦ಕ್ಕೆ ಕರಗದಮ್ಮ, ಮಾರೆಮ್ಮ, ನಲ್ಲಗಂಗಮ್ಮ, ಸಪ್ಪಲಮ್ಮ, ಸಪ್ತಮಾತೃಕೆ ದೇವಿಯರಿಗೆ ದೀಪೋತ್ಸವ ನಡೆಯಲಿದೆ. ೨೧ರಂದು ಬೆಳಗ್ಗೆ ೯-೩೦ ಗಂಟೆಗೆ ಉಟ್ಲುಪೂಜೆ ಕಾರ್ಯಕ್ರಮಕ್ಕೆ ಚಾಲನೆ ನೀಡಲಿದ್ದಾರೆ. ಮಧ್ಯಾಹ್ನ ೧೨-೦೦ ಗಂಟೆಗೆ ಅನ್ನಸಂತರ್ಪಣೆಯನ್ನು ಏರ್ಪಡಿಸಲಾಗಿದೆ.

<><*<><>*><>

ಕಾರವಾರ ಜಿಲ್ಲೆಯಲ್ಲಿ ರಾಷ್ಟ್ರೀಯ ತೋಟಗಾರಿಕಾ ಮಿಷನ್ ಯೋಜನೆಯಡಿ ವಿವಿಧ ಸೌಲಭ್ಯಗಳಿಗೆ ಸಂಬಂಧಿಸಿದಂತೆ ಸರ್ಕಾರದಿಂದ ಸಹಾಯಧನ ಪಡೆಯಲು ಅರ್ಜಿ ಆಹ್ವಾನಿಸಲಾಗಿದೆ. ಕಾಳುಮೆಣಸು, ಬಾಳೆ, ಅನಾನಸ್, ಮಾವು, ಡ್ರಾಗನ್, ರಾಂಬೂತನ್, ಹಲಸು, ಹೈಬ್ರಿಡ್ ತರಕಾರಿ, ಹೂವು ಮತ್ತು ಗೇರು ಬೆಳೆಗಳ ಪ್ರದೇಶ ವಿಸ್ತರಣೆ, ಅಣಬೆ ಉತ್ಪಾದನೆ, ಪ್ಯಾಕ್ ಹೌಸ್, ಹನಿ ನೀರಾವರಿ ಮತ್ತು ನೀರು ಸಂಗ್ರಹಣಾ ಸೇರಿದಂತೆ ಘಟಕಗಳ ನಿರ್ಮಾಣ, ಟ್ರ್ಯಾಕ್ಟರ್, ಅಲ್ಯೂಮಿನಿಯಂ ಏಣಿ, ಫೈಬರ್ ದೋಟಿ, ಕಳೆ ಹುಲ್ಲು ಕತ್ತರಿಸುವ, ಅಡಿಕೆ ಸುಲಿಯುವ, ಕಾಳು ಮೆಣಸು ಬಿಡಿಸುವ, ಮರ ಕತ್ತರಿಸುವ ಮತ್ತು ಸಿಂಪಡಣೆ ಮಾಡುವ ಯಂತ್ರಗಳ ಖರೀದಿಗೆ ಸಹಾಯಧನ ಪಡೆಯಲು ಅರ್ಜಿ ಸಲ್ಲಿಸಬಹುದಾಗಿದೆ. ಹೆಚ್ಚಿನ ಮಾಹಿತಿಗೆ ಸಮೀಪದ ತೋಟಗಾರಿಕಾ ಇಲಾಖೆಯ ಕಚೇರಿಗೆ ಭೇಟಿ ನೀಡಿ ಅರ್ಜಿ ಪಡೆಯಬಹುದು ಎಂದು ಉತ್ತರಕನ್ನಡ ಜಿಲ್ಲಾ ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

<><*<><>*><>

ಬೆಂಗಳೂರಿನ ಎಂ. ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿಂದು ನಡೆಯಲಿರುವ ಐಪಿಎಲ್ ಟಿ-೨೦ ಕ್ರಿಕೆಟ್ ಪಂದ್ಯದಲ್ಲಿ ರಾಯಲ್ ಚಾಲೆಂಜರ್ಸ್ ಬೆಂಗಳೂರು ಹಾಗೂ ಪಂಜಾಬ್ ಕಿಂಗ್ಸ್ ತಂಡಗಳು ಸೆಣಸಲಿವೆ. ಪಂದ್ಯ ರಾತ್ರಿ ೭:೩೦ಕ್ಕೆ ಆರಂಭವಾಗಲಿದೆ.

<><*<><>*><>

ಕರ್ನಾಟಕದ ಒಳನಾಡಿನ ಕೆಲವು ಸ್ಥಳಗಳಲ್ಲಿ ಮಳೆಯಾಗಿದೆ. ಕರಾವಳಿಯಲ್ಲಿ ರಾಜ್ಯಾದ್ಯಂತ ಒಣ ಹವೆ ಇತ್ತು. ಕಲಬುರ್ಗಿ ಜಿಲ್ಲೆಯ ಚಿಂಚೋಳಿಯಲ್ಲಿ ೨ ಸೆಂಟಿಮೀಟರ್ ಮಳೆಯಾಗಿದೆ. ರಾಜ್ಯದ ಕರಾವಳಿ ಭಾಗದಲ್ಲಿ ಗರಿಷ್ಟ ತಾಪಮಾನವು ೩೩-೩೬ ಡಿಗ್ರಿ ಸೆಲ್ಸಿಯಸ್ ದಾಖಲಾಗಿದ್ದು, ಬೆಳಗಾವಿ ವಿಮಾನ ನಿಲ್ದಾಣ, ಬಾಗಲಕೋಟೆ, ಕೊಪ್ಪಳ ಮತ್ತು ಹಾವೇರಿ ೩೪-೩೬, ವಿಜಯಪುರ, ಬೀದರ್, ಧಾರವಾಡ, ಗದಗ ಮತ್ತು ರಾಯಚೂರು ಕಲಬುರ್ಗಿ ೪೦.೬, ಚಿಕ್ಕಮಗಳೂರಿನಲ್ಲಿ ಸುಮಾರು ೨೯, ಮಡಿಕೇರಿ ೩೧, ಬೆಂಗಳೂರು ನಗರ, ಚಾಮರಾಜನಗರ, ಹಾಸನ, ಚಿಂತಾಮಣಿ, ಮಂಡ್ಯ ಚಿತ್ರದುರ್ಗ ಮತ್ತು ಮೈಸೂರು, ರಾಜ್ಯದ ದಕ್ಷಿಣ ಒಳನಾಡಿನಲ್ಲಿ ೩೬ ಡಿಗ್ರಿ ಸೆಲ್ಸಿಯಸ್ ತಾಪಮಾನ ದಾಖಲಾಗಿದೆ.

**<><*<>** ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು **<>*><>**